# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(ಸಿ1) ಪಿಆರ್/ಇ-30608/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರಪಾಲಿಕೆ ಕಛೇರಿಗಳು,
ಬೆಂಗಳೂರು. ದಿನಾಂಕ: 13.6.24

**ಕಛೇರಿ ಆದೇಶ**

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಸೇವಾ ನಿರತ ಅರ್ಹ ಸರ್ಕಾರಿ ನೌಕರರಿಗೆ ಪ್ರೋತ್ಸಾಹ ಧನವನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆದೇಶ ಸಂಖ್ಯೆ: ಸಿ.ಆ.ಸು.ಇ 99 ಸೇವನೆ 2022, ದಿನಾಂಕ: 24-01-2023
2) ಉಪ ನಿಯಂತ್ರಕರು (ಹಣಕಾಸು) ರವರ ವರದಿ ದಿನಾಂಕ: 11-01-2024.
3) ಈ ಕಛೇರಿ ಟಿಪ್ಪಣಿ ಸಂಖ್ಯೆ: ಬಿ12(5ಜಿ)ಪಿ.ಆರ್/ಇ-30608/23-24 ದಿ: 15-03-2024
4) ಮಾನ್ಯ ಆಡಳಿತಗಾರರು ಬಿ.ಬಿ.ಎಂ.ಪಿರವರ ನಡುವಳಿ ವಿಷಯ ಸಂಖ್ಯೆ: 195/2023-24 ದಿನಾಂಕ: 15-03-2024

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-(1)ರ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ನಡವಳಿ ಆದೇಶದಲ್ಲಿ ಈ ಕೆಳಕಂಡಂತೆ ಆದೇಶ ಹೊರಡಿಸಿರುತ್ತದೆ.

"ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ಜಾರಿಗೆ ಬಂದ ದಿನಾಂಕ: 22-03-2012ರಂದು ಸೇವೆಯಲ್ಲಿದ್ದು, ದಿನಾಂಕ: 17-04-2021ರೊಳಗೆ ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅರ್ಹ ಸೇವಾನಿರತ ಸರ್ಕಾರಿ ನೌಕರರು ಹಾಜರುಪಡಿಸುವ ಡಿಜಿಟಲ್ ಸಹಿ ಹೊಂದಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷಾ ಪ್ರಮಾಣ ಪತ್ರವನ್ನು ಪರಿಶೀಲಿಸಿ ಉತ್ತೀರ್ಣರಾದ ದಿನಾಂಕವನ್ನು ಖಚಿತಪಡಿಸಿಕೊಂಡು ಪ್ರೋತ್ಸಾಹ ಧನ ಮಂಜೂರು ಮಾಡಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಸಕ್ಷಮ ಪ್ರಾಧಿಕಾರಗಳಿಗೆ ಆದೇಶಿಸಿದೆ.

ಸದರಿ ಪ್ರೋತ್ಸಾಹ ಧನವನ್ನು ಸರ್ಕಾರಿ ನೌಕರರು ವೇತನ ಪಡೆಯುವ ಲೆಕ್ಕಶೀರ್ಷಿಕೆಯಡಿಯ Subsidiary expenses ಉಪಶೀರ್ಷಿಕೆಯಡಿಯಲ್ಲಿ ಭರಿಸುವುದು. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 471 ವೆಚ್ಚ-12 2022 ದಿನಾಂಕ: 19-12-2022ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ ಎಂದು ಆದೇಶಿಸಲಾಗಿರುತ್ತದೆ.

ಮೇಲ್ಕಂಡ ಸರ್ಕಾರದ ಆದೇಶವನ್ನು ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಸಂಬಂಧ ಉಲ್ಲೇಖ-(3)ರಂತೆ ತೆರಿಗೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿಯ ಅಧಿಕಾರವನ್ನು ಚಲಾಯಿಸಿ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರು ಟಿಪ್ಪಣಿ ಮಂಡಿಸಿದ್ದು, ಉಲ್ಲೇಖ-(4)ರಂತೆ ಮಾನ್ಯ ಆಡಳಿತಗಾರರು ವಿಷಯ ಸಂಖ್ಯೆ: 195/2023-24 ದಿನಾಂಕ: 15-03-2024ರಂದು ಟಿಪ್ಪಣಿಯನ್ನು ಒಪ್ಪಿರುವುದರಿಂದ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಆದೇಶ**

**ಸಂಖ್ಯೆ: ಬಿ12(ಸಿ1)/ಪಿಆರ್/ಇ-30608/2023-24** **ದಿನಾಂಕ:**

ಪ್ರಸ್ತಾವನೆಯಲ್ಲಿ ವಿವರಿಸಿರುವವ ಅಂಶಗಳ ಹಿನ್ನೆಲೆಯಲ್ಲಿ ಉಲ್ಲೇಖ-(1)ರ ಸರ್ಕಾರದ ಆದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳಲು ಉಲ್ಲೇಖ-(4)ರಂತೆ ತೆರಿಗೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿಯ ಅಧಿಕಾರವನ್ನು ಚಲಾಯಿಸಿ ಮಾನ್ಯ ಆಡಳಿತಗಾರರು ಒಪ್ಪಿರುವುದರಿಂದ, ಸದರಿ ಆದೇಶವನ್ನು ಪಾಲಿಕೆಯಲ್ಲಿ ಅಳವಡಿಸಿಕೊಳ್ಳಲಾಗಿದೆ.

ರವರ ಕ: 316 ದಿನಾಂಕ: 14/06/2024 ಬೃಹತ್ ಬೆಂಗಳೂರು ಮಹಾನಗರ

Sd/- 14/06/2024

........3

ಇದರಂತೆ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ಜಾರಿಗೆ ಬಂದ ದಿನಾಂಕ: 22-03-2012ರಂದು ಸೇವೆಯಲ್ಲಿದ್ದು, ದಿನಾಂಕ: 17-04-2021ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅರ್ಹ ಸೇವಾನಿರತ ಸರ್ಕಾರಿ ನೌಕರರು ಹಾಜರುಪಡಿಸುವ ಡಿಜಿಟಲ್ ಸಹಿ ಹೊಂದಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷಾ ಪ್ರಮಾಣ ಪತ್ರವನ್ನು ಪರಿಶೀಲಿಸಿ ಉತ್ತೀರ್ಣರಾದ ದಿನಾಂಕವನ್ನು ಖಚಿತಪಡಿಸಿಕೊಂಡು ಪ್ರೋತ್ಸಾಹ ಧನ ಮಂಜೂರು ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ.

13/6

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದಂತೆ

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

11/6/2024 11/6/24

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರುಗಳಿಗೆ ಕಳುಹಿಸಿದೆ.
: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರು / ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಉಪ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.